# All India Radio: Bangalore
# National Bulletin In Kannada
# 15.03.2026  19.35 hrs
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆಗೆ ವೇಳಾಪಟ್ಟಿ ಪ್ರಕಟ; ಅಸ್ಸಾಂ, ಕೇರಳ ಮತ್ತು ಪುದುಚೆರಿಗಳಲ್ಲಿ ಏಪ್ರಿಲ್ ೯ ರಂದು, ತಮಿಳುನಾಡಿನಲ್ಲಿ ೨೩ ರಂದು; ಪಶ್ಚಿಮ ಬಂಗಳಾದಲ್ಲಿ ಏಪ್ರಿಲ್ ೨೩ ಮತ್ತು ೨೯ ರಂದು ಮತದಾನ

೨. ಕರ್ನಾಟಕದ ಎರಡು ಕ್ಷೇತ್ರಗಳಿಗೆ ಏಪ್ರಿಲ್ ೯ ರಂದು ಉಪಚುನಾವಣೆ; ಮೇ ೪ ರಂದು ಮತ ಎಣಿಕೆ

೩. ಫಾಸ್ಟ್‌ಟ್ಯಾಗ್ ವಾರ್ಷಿಕ ಪಾಸ್ ದರ ೭೫ ರೂಪಾಯಿ ಹೆಚ್ಚಳ; ಪರಿಷ್ಕೃತ ದರ ಮುಂದಿನ ತಿಂಗಳಿಂದ ಜಾರಿ

೪. ಗಣರಾಜ್ಯೋತ್ಸವದ ಅಂಗವಾಗಿ ಘೋಷಿಸಲಾಗುವ ಪದ್ಮ ಪ್ರಶಸ್ತಿ ೨೦೨೭ ಕ್ಕೆ ನಾಮನಿರ್ದೇಶನ ಮತ್ತು ಶಿಫಾರಸುಗಳ ಆಹ್ವಾನ; ನಾಮನಿರ್ದೇಶನ ಸಲ್ಲಿಸಲು ಜುಲೈ ೩೧ರವರೆಗೆ ಅವಕಾಶ

***************

ಕೇಂದ್ರ ಚುನಾವಣಾ ಆಯೋಗವು ಅಸ್ಸಾಂ, ಕೇರಳ, ತಮಿಳುನಾಡು ಮತ್ತು ಪಶ್ಚಿಮ ಬಂಗಾಳ ರಾಜ್ಯಗಳು ಹಾಗೂ ಪುದುಚೆರಿ ಕೇಂದ್ರಾಡಳಿತ ಪ್ರದೇಶಗಳ ವಿಧಾನಸಭಾ ಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಿದೆ.

ನವದೆಹಲಿಯಲ್ಲಿ ಚುನಾವಣಾ ವೇಳಾಪಟ್ಟಿ ಪ್ರಕಟಿಸಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಅಸ್ಸಾಂ, ಕೇರಳ, ಪುದುಚೆರಿ ಮತ್ತು ತಮಿಳುನಾಡು ವಿಧಾನಸಭಾ ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಚುನಾವಣೆ ನಡೆಯಲಿದ್ದು, ಪಶ್ಚಿಮ ಬಂಗಾಳದಲ್ಲಿ ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ ಎಂದು ತಿಳಿಸಿದರು.

ಅಸ್ಸಾಂ, ಕೇರಳ ಮತ್ತು ಪುದುಚೇರಿಯಲ್ಲಿ ಮುಂದಿನ ತಿಂಗಳ ೯ ರಂದು ಮತದಾನ ನಡೆಯಲಿದೆ ಮತ್ತು ತಮಿಳುನಾಡಿನಲ್ಲಿ ೨೩ ರಂದು ಮತದಾನ ನಡೆಯಲಿದೆ. ಪಶ್ಚಿಮ ಬಂಗಾಳದಲ್ಲಿ ಏಪ್ರಿಲ್ ೨೩ ಮತ್ತು ೨೯ ರಂದು ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ. ನಾಲ್ಕು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ ಮತ ಎಣಿಕೆ ಮೇ ೪ ರಂದು ನಡೆಯಲಿದೆ.

ಚುನಾವಣಾ ವೇಳಾಪಟ್ಟಿ ಘೋಷಣೆಯೊಂದಿಗೆ, ಈ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದಲ್ಲಿ ತಕ್ಷಣದಿಂದ ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿದೆ ಎಂದು ಅವರು ತಿಳಿಸಿದ್ದಾರೆ.

ಒಟ್ಟು ೮೨೪ ಕ್ಷೇತ್ರಗಳಿಗೆ ನಡೆಯಲಿರುವ ವಿಧಾನಸಭಾ ಚುನಾವಣೆಗೆ ೧೭ ಕೋಟಿಗೂ ಹೆಚ್ಚು ಜನರು ಮತ ಚಲಾಯಿಸಲು ಅರ್ಹರಾಗಿದ್ದಾರೆ. ಸುಮಾರು ಎರಡು ಲಕ್ಷಕ್ಕೂ ಹೆಚ್ಚು ಮತದಾನ ಕೇಂದ್ರಗಳನ್ನು ತೆರೆಯಲಾಗುವುದು ಮತ್ತು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದಾದ್ಯಂತ ಸುಮಾರು ೨೫ ಲಕ್ಷ ಚುನಾವಣಾ ಅಧಿಕಾರಿಗಳನ್ನು ನಿಯೋಜಿಸಲಾಗುವುದು ಎಂದು ಜ್ಞಾನೇಶ್ ಕುಮಾರ್ ಹೇಳಿದ್ದಾರೆ.

ಚುನಾವಣಾ ಪ್ರಕ್ರಿಯೆಯನ್ನು ಹೆಚ್ಚು ಪಾರದರ್ಶಕವಾಗಿಸಲು ಆಯೋಗವು ಇತ್ತೀಚೆಗೆ ೩೦ ಹೊಸ ಉಪಕ್ರಮಗಳನ್ನು ಪರಿಚಯಿಸಿದೆ ಎಂದು ಹೇಳಿದ ಅವರು, ಪ್ರತಿ ಮತಗಟ್ಟೆಯಲ್ಲಿ ಗರಿಷ್ಠ ಸಾವಿರದ ೨೦೦ ಮತದಾರರು ಮತ್ತು ದಿನವಿಡೀ ಮೇಲ್ವಿಚಾರಣೆಗಾಗಿ ೧೦೦ ಪ್ರತಿಶತ ವೆಬ್‌ಕಾಸ್ಟಿಂಗ್ ಖಚಿತಪಡಿಸಿಕೊಳ್ಳಲಾಗುವುದು ಎಂದು ಹೇಳಿದ್ದಾರೆ.

೨೯೪ ಸದಸ್ಯರ ಪಶ್ಚಿಮ ಬಂಗಾಳದ ವಿಧಾನಸಭೆಯ ಅವಧಿ ಮೇ ೭ ರಂದು, ೧೨೬ ಸದಸ್ಯರ ಅಸ್ಸಾಂ ವಿಧಾನಸಭೆಯ ಅವಧಿ ಮೇ ೨೦ ರಂದು, ತಮಿಳುನಾಡಿನಲ್ಲಿ ೨೩೪ ಸದಸ್ಯರ ವಿಧಾನಸಭೆಯ ಅವಧಿ ಮೇ ೧೦ ರಂದು ಮತ್ತು ೧೪೦ ಸದಸ್ಯರ ಕೇರಳ ವಿಧಾನಸಭೆಯ ಅವಧಿ ಮೇ ೨೩ ರಂದು ಮುಕ್ತಾಯವಾಗಲಿದೆ. ಪುದುಚೆರಿಯಲ್ಲಿ ೩೦ ಸದಸ್ಯರ ವಿಧಾನಸಭೆಯ ಅವಧಿ ಜೂನ್ ೧೫ ರಂದು ಪೂರ್ಣಗೊಳ್ಳಲಿದೆ.

ಕರ್ನಾಟಕ ಮತ್ತು ಮಹಾರಾಷ್ಟ್ರಗಳ ಎರಡು ವಿಧಾನಸಭಾ ಕ್ಷೇತ್ರಗಳು ಹಾಗೂ ಗೋವಾ, ಗುಜರಾತ್, ನಾಗಾಲ್ಯಾಂಡ್ ಮತ್ತು ತ್ರಿಪುರಾಗಳ ತಲಾ ಒಂದು ಕ್ಷೇತ್ರ ಸೇರಿದಂತೆ ಒಟ್ಟು ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಉಪಚುನಾವಣೆ ದಿನಾಂಕ ಘೋಷಿಸಲಾಗಿದೆ. ಗೋವಾ, ಕರ್ನಾಟಕ, ನಾಗಾಲ್ಯಾಂಡ್ ಮತ್ತು ತ್ರಿಪುರಾಗಳಲ್ಲಿ ಏಪ್ರಿಲ್ ೯ ರಂದು ಹಾಗೂ ಗುಜರಾತ್ ಮತ್ತು ಮಹಾರಾಷ್ಟ್ರಗಳಲ್ಲಿ ಮುಂದಿನ ತಿಂಗಳ ೨೩ ರಂದು ಮತದಾನ ನಡೆಯಲಿದೆ.

ಕರ್ನಾಟಕದಲ್ಲಿ ಮಾಜಿ ಶಾಸಕ ಮೇಟಿ ಹುಲ್ಲಪ್ಪ ಯಮನಪ್ಪ ಅವರ ನಿಧನದಿಂದ ತೆರವಾಗಿದ್ದ ಬಾಗಲಕೋಟೆ ಕ್ಷೇತ್ರ ಹಾಗೂ ಮಾಜಿ ಶಾಸಕ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾಗಿದ್ದ ದಾವಣಗೆರೆ ದಕ್ಷಿಣ ಕ್ಷೇತ್ರಕ್ಕೆ ಉಪಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಲಾಗಿದೆ.

ನಾಮಪತ್ರ ಸಲ್ಲಿಸಲು ಈ ತಿಂಗಳ ೨೩ ರವರೆಗೆ ಅವಕಾಶವಿದ್ದು, ಮರುದಿನ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆ ಹಿಂಪಡೆಯಲು ಮಾರ್ಚ್ ೨೬ ಕೊನೆಯ ದಿನವಾಗಿದೆ.

***************

ಗುಜರಾತ್‌ನ ಜುನಾಗಢದ ಬಂಟ್ವಾದಲ್ಲಿ ಹೊಸದಾಗಿ ನಿರ್ಮಿಸಲಾದ ಪುರಸಭೆ ಕಟ್ಟಡ, ಉದ್ಯಾನಗಳು ಮತ್ತು ಆಂಬ್ಯುಲೆನ್ಸ್ ಸೇವೆಯನ್ನು ಕೇಂದ್ರ ಕಾರ್ಮಿಕ ಮತ್ತು

ಇದೇ ವೇಳೆ ಅವರು, ಮನವದರ್ ಮತ್ತು ಕೇಶೋಡ್ ವಿಧಾನಸಭಾ ಕ್ಷೇತ್ರಗಳಲ್ಲಿ ೮ ಕೋಟಿ ೪೩ ಲಕ್ಷ ರೂಪಾಯಿ ಮೌಲ್ಯದ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆಯನ್ನು ವರ್ಚುಯಲ್ ಮಾದರಿಯಲ್ಲಿ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಂಸದರು ಮತ್ತು ಶಾಸಕರ ಕ್ಷೇತ್ರಗಳಿಗೆ ನೀಡುವ ಅನುದಾನದ ಸಮರ್ಪಕ ಬಳಕೆ ಮುಖ್ಯ ಎಂದು ಹೇಳಿದರು. ನಂತರ ಮಾಂಡವಿಯ ಅವರು ಘೇಡ್ ಪ್ರದೇಶದ ಫುಲ್ರಾಮ್-ಘೇಡ್ ಮತ್ತು ಮೇಖ್ಡಿ ಗ್ರಾಮಗಳಿಗೆ ಭೇಟಿ ನೀಡಿದರು.

***************

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ-ಎನ್‌ಎಚ್‌ಎಐ ಹಣಕಾಸು ವರ್ಷ ೨೦೨೬-೨೭ಕ್ಕೆ ಅನ್ವಯವಾಗುವಂತೆ ಫಾಸ್ಟ್‌ಟ್ಯಾಗ್ ವಾರ್ಷಿಕ ಪಾಸ್ ದರವನ್ನು ೩ ಸಾವಿರ ರೂಪಾಯಿಗಳಿಂದ ೩ ಸಾವಿರದ ೭೫ ರೂಪಾಯಿಗಳಿಗೆ ಪರಿಷ್ಕರಿಸಿದೆ.

ವಾರ್ಷಿಕ ಪಾಸ್ ಸೌಲಭ್ಯ ಪಡೆಯಲು ಬಯಸುವ ಎಲ್ಲಾ ಅರ್ಹ ವಾಣಿಜ್ಯೇತರ ವಾಹನಗಳಿಗೆ ದೇಶಾದ್ಯಂತದ ಸುಮಾರು ೧ ಸಾವಿರ ೧೫೦ ಟೋಲ್ ಪ್ಲಾಜಾಗಳಲ್ಲಿ ಹೊಸ ದರ ಏಪ್ರಿಲ್ ೧ ರಿಂದ ಅನ್ವಯವಾಗಲಿವೆ.

ಈ ವಾರ್ಷಿಕ ಪಾಸ್ ಸೌಲಭ್ಯವು ಒಂದು ವರ್ಷದ ಅವಧಿಗೆ ಅಥವಾ ೨೦೦ ಬಾರಿ ಟೋಲ್ ದಾಟಲು ಮಾನ್ಯವಾಗಿರುತ್ತದೆ.

***************

ಪದ್ಮ ಪ್ರಶಸ್ತಿ -೨೦೨೭ ಕ್ಕೆ ನಾಮನಿರ್ದೇಶನಗಳು ಮತ್ತು ಶಿಫಾರಸುಗಳನ್ನು ಆಹ್ವಾನಿಸಲಾಗಿದೆ. ಮುಂದಿನ ವರ್ಷದ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಘೋಷಿಸಲಾಗುವ ಪದ್ಮ ಪ್ರಶಸ್ತಿಗಳಿಗೆ ನಾಮನಿರ್ದೇಶನ ಮಾಡಲು ಜುಲೈ ೩೧ ಕೊನೆಯ ದಿನವಾಗಿದೆ ಎಂದು ಗೃಹ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ರಾಷ್ಟ್ರೀಯ ಪುರಸ್ಕಾರ ಪೋರ್ಟಲ್ ಮೂಲಕ ಪದ್ಮ ಪ್ರಶಸ್ತಿಗಳಿಗೆ ನಾಮನಿರ್ದೇಶನಗಳು ಮತ್ತು ಶಿಫಾರಸುಗಳನ್ನು ಆನ್‌ಲೈನ್ ಮೂಲಕ ಮಾತ್ರ ಸಲ್ಲಿಸಬಹುದಾಗಿದೆ. ಜನಾಂಗ, ಉದ್ಯೋಗ, ಸ್ಥಾನ ಅಥವಾ ಲಿಂಗದ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳು ಈ ಪ್ರಶಸ್ತಿಗಳಿಗೆ ಅರ್ಹರು. ವೈದ್ಯರು ಮತ್ತು ವಿಜ್ಞಾನಿಗಳನ್ನು ಹೊರತುಪಡಿಸಿ ಸಾರ್ವಜನಿಕ ವಲಯಗಳಲ್ಲಿ ಕೆಲಸ ಮಾಡುವವರು ಹಾಗೂ ಸರ್ಕಾರಿ ನೌಕರರು ಪದ್ಮ ಪ್ರಶಸ್ತಿಗೆ ಅರ್ಹರಲ್ಲ ಎಂದು ಸಚಿವಾಲಯ ತಿಳಿಸಿದೆ. ಸ್ವಯಂ ನಾಮನಿರ್ದೇಶನ ಸೇರಿದಂತೆ ಜನರು ನಾಮನಿರ್ದೇಶನಗಳು ಅಥವಾ ಶಿಫಾರಸುಗಳನ್ನು ಸಲ್ಲಿಸಬಹುದಾಗಿದೆ.

ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ ಪುರಸ್ಕಾರಗಳು ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಪೈಕಿ ಸೇರಿದ್ದು, ೧೯೫೪ ರಲ್ಲಿ ಸ್ಥಾಪಿಸಲಾದ ಈ ಪ್ರಶಸ್ತಿಗಳು ಕಲೆ, ಸಾಹಿತ್ಯ, ಶಿಕ್ಷಣ, ಕ್ರೀಡೆ, ವೈದ್ಯಕೀಯ, ಸಮಾಜಕಾರ್ಯ, ವಿಜ್ಞಾನ, ಎಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳು, ನಾಗರಿಕ ಸೇವೆ, ವ್ಯಾಪಾರ ಮತ್ತು ಕೈಗಾರಿಕೆ ಸೇರಿದಂತೆ ಎಲ್ಲಾ ವಿಭಾಗಗಳಲ್ಲಿ ವಿಶಿಷ್ಟ ಮತ್ತು ಅಸಾಧಾರಣ ಸಾಧನೆ ಮಾಡಿದವರಿಗೆ ಪ್ರದಾನ ಮಾಡಲಾಗುತ್ತದೆ.

***************

ಲಡಾಖ್‌ನಲ್ಲಿ ಭಾರೀ ಹಿಮಪಾತದಿಂದಾಗಿ ಆರು ದಿನಗಳಿಂದ ಮುಚ್ಚಲ್ಪಟ್ಟಿದ್ದ ಆಯಕಟ್ಟಿನ ರಾಷ್ಟ್ರೀಯ ಹೆದ್ದಾರಿ ೧ ರ ಉದ್ದಕ್ಕೂ ಜೋಜಿ ಲಾ ಪಾಸ್‌ನಲ್ಲಿ ಸಂಚಾರ ಪುನರಾರಂಭಗೊಂಡಿದೆ. ಅಧಿಕಾರಿಗಳು ಸೋನಾಮಾರ್ಗ್‌ನಿಂದ ಲಡಾಖ್ ಕಡೆಗೆ ವಾಹನಗಳ ಸಂಚಾರಕ್ಕೆ ಅವಕಾಶ ನೀಡಿದ್ದು, ೨,೦೦೦ ಕ್ಕೂ ಹೆಚ್ಚು ಪ್ರಯಾಣಿಕರು ಮತ್ತು ಸುಮಾರು ೩೦೦ ವಾಹನಗಳು ಪಾಸ್ ಅನ್ನು ಹಾದು ಹೋಗಿವೆ.

ರಸ್ತೆಯಲ್ಲಿ ಸಂಚಾರ ಪುನರಾರಂಭಕ್ಕೆ ಹಿಮ ತೆರವು ತಂಡಗಳು ನಿರಂತರವಾಗಿ ಶ್ರಮಿಸಿದ್ದು, ಜೋಜಿ ಲಾ ಪಾಸ್ ಮೂಲಕ ಪ್ರಯಾಣ ಕೈಗೊಳ್ಳುವ ಮುನ್ನ ಸಂಚಾರ ನಿಯಮಗಳನ್ನು ಪಾಲಿಸುವಂತೆ ಹಾಗೂ ಹವಾಮಾನ ಮತ್ತು ರಸ್ತೆ ಸ್ಥಿತಿಗತಿ ತಿಳಿಯುವಂತೆ ಪ್ರಯಾಣಿಕರಿಗೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

***************

ದೇಶಾದ್ಯಂತ ಎಲ್‌ಪಿಜಿ ವಿತರಕರಲ್ಲಿ ಅನಿಲ ಪೂರೈಕೆ ಸ್ಥಗಿತಗೊಂಡಿರುವ ಬಗ್ಗೆ ಯಾವುದೇ ವರದಿಗಳು ಬಂದಿಲ್ಲ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಇಂದು ತಿಳಿಸಿದೆ.

ಎಲ್‌ಪಿಜಿ ಬುಕಿಂಗ್‌ನಲ್ಲಿ ಇಳಿಕೆ ಕಂಡುಬಂದಿದ್ದು, ಈ ತಿಂಗಳ ೧೩ ರಂದು ಸುಮಾರು ೮೮ ಲಕ್ಷ ಜನರು ಸಿಲಿಂಡರ್ ಬುಕ್ ಮಾಡಿದ್ದು, ನಿನ್ನೆ ಸುಮಾರು ೭೭ ಲಕ್ಷ ಬುಕಿಂಗ್ ಗಳು ದಾಖಲಾಗಿವೆ ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ದೇಶಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ದಾಸ್ತಾನು ಸಾಕಷ್ಟು ಲಭ್ಯವಿದೆ. ಅನಿಲ ಸಿಲಿಂಡರ್ ಗಳ ದಾಸ್ತಾನು ಕೂಡ ಸಾಕಷ್ಟು ಲಭ್ಯವಿದ್ದು, ನಾಗರಿಕರು ಹೆದರಿ ಅನಿಲ ಸಿಲಿಂಡರ್ ಬುಕ್ ಮಾಡದಂತೆ ಸಚಿವಾಲಯ ಮನವಿ ಮಾಡಿದೆ.

***************

ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ನಾಳೆಯಿಂದ ಮುಂದಿನ ತಿಂಗಳ ೧೦ ರವರೆಗೆ ನಡೆಯಬೇಕಿದ್ದ ೧೨ ನೇ ತರಗತಿ ಪರೀಕ್ಷೆಗಳನ್ನು ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ - ಸಿಬಿಎಸ್‌ಇ ರದ್ದುಪಡಿಸಿದೆ.

ಈ ಹಿಂದೆ ಮುಂದೂಡಲ್ಪಟ್ಟ ಪರೀಕ್ಷೆಗಳನ್ನು ಸಹ ರದ್ದುಗೊಳಿಸಲಾಗುವುದು ಎಂದು ಮಂಡಳಿ ತಿಳಿಸಿದೆ.

ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ೧೨ ನೇ ತರಗತಿ ಅಭ್ಯರ್ಥಿಗಳ ಫಲಿತಾಂಶ ಘೋಷಣೆಯ ವಿಧಾನವನ್ನು ನಂತರದಲ್ಲಿ ತಿಳಿಸಲಾಗುವುದು ಎಂದು ಮಂಡಳಿ ಹೇಳಿದೆ.

***************

ಬಾರಾಮುಲ್ಲಾ ಜಿಲ್ಲೆಯ ಉರಿ ವಲಯದಲ್ಲಿ ಇಂದು ಭಾರತೀಯ ಸೇನೆ ಮತ್ತು ಜಮ್ಮು ಮತ್ತು ಕಾಶ್ಮೀರ ಪೊಲೀಸರು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಒಬ್ಬ ಪಾಕಿಸ್ತಾನಿ ಭಯೋತ್ಪಾದಕ ಸಾವನ್ನಪ್ಪಿದ್ದಾನೆ.

ಬುಚಾರ್ ಪ್ರದೇಶದಲ್ಲಿ ನಿಯಂತ್ರಣ ರೇಖೆಯ ಉದ್ದಕ್ಕೂ ನಿನ್ನೆ ಮಧ್ಯರಾತ್ರಿ ಒಳನುಸುಳುವಿಕೆ ಪ್ರಯತ್ನವನ್ನು ವಿಫಲಗೊಳಿಸಲಾಗಿದೆ ಎಂದು ಸೇನೆ ತಿಳಿಸಿದೆ.

*******ಮುಕ್ತಾಯ********